## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ವಿ.ಆರ್.ಪೂಜಾರಿ, ಹಿಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಹಾಲಿ ನಿವೃತ್ತ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಜಿಲ್ಲಾ ಪಂಚಾಯತ್, ವಿಜಯಪುರ ಜಿಲ್ಲೆ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:- 1) ನಿಬಂಧಕರು, ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ BGM-387/2004/ARE-5 ದಿನಾಂಕ. 05.10.2016.

2) ಮಾನ್ಯ ಉಪ ಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ : Compt/ Uplok/ BGM-387/2004/ARE-5 ದಿನಾಂಕ. 04.10.2016.

-----

**ಪ್ರಸ್ತಾವನೆ:-**

ನಿಬಂಧಕರು, ವಿಚಾರಣೆಗಳು-5, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 05.10.2016ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ-1 ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಶ್ರೀ ಶಿವಶಂಕರ ರಾಚಯ್ಯ ಡೋಣಜಮಠ, ಚಡಚಣ ಇಂಡಿ ತಾಲ್ಲೂಕು, ವಿಜಯಪುರ ಜಿಲ್ಲೆ ಇವರು ಶ್ರೀ ವಿ.ಆರ್. ಪೂಜಾರಿ, ಹಿಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಚಡಚಣ ಗ್ರಾಮ, ಇಂಡಿ ತಾಲ್ಲೂಕು ವಿಜಯಪುರ ಜಿಲ್ಲೆ ಇವರ ವಿರುದ್ಧ ದಿನಾಂಕ:21.12.2014 ರಂದು ಲೋಕಾಯುಕ್ತ ಕಚೇರಿಗೆ ದೂರನ್ನು ಸಲ್ಲಿಸಿರುತ್ತಾರೆ. ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ 2003-04ನೇ ಸಾಲಿನಲ್ಲಿ ವಿಜಯಪುರ ಜಿಲ್ಲೆ ಇಂಡಿ ತಾಲ್ಲೂಕು ಚಡಚಣ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಚಡಚಣ ಗ್ರಾಮದಲ್ಲಿನ ಕನ್ನಡ ಗಂಡು ಮಕ್ಕಳ ಶಾಲೆ-2ರಲ್ಲಿ ಶೌಚಾಲಯ ನಿರ್ಮಾಣಕ್ಕಾಗಿ ಶಾಲೆ ಅಭಿವೃದ್ಧಿ ಸಮಿತಿಯು ರೂ.20,000/- ಹಣ ಮಂಜೂರು ಮಾಡಿದ್ದು ಅದರ ಜೊತೆಗೆ ರೂ.5,000/- ಮೊತ್ತವನ್ನು ಸ್ವಚ್ಛ ಗ್ರಾಮ ಯೋಜನೆ ಅನುದಾನದಿಂದ ಹೆಚ್ಚುವರಿಯಾಗಿ ಬಳಸಿ ಒಟ್ಟಾರೆ ರೂ.25,000/-ಗಳ ಮೊತ್ತದಲ್ಲಿ ಶೌಚಾಲಯ ನಿರ್ಮಿಸಿದ್ದು ಸದರಿ ಶೌಚಾಲಯವು ಶಾಲೆಯ ಆವರಣದ ಗೋಡೆ ಇಲ್ಲದ್ದರಿಂದ ಗ್ರಾಮಸ್ಥರಿಂದ ದುರುಪಯೋಗಗೊಂಡಿದ್ದು, ಹಾಳಾಗಿರುವುದಾಗಿ ತಿಳಿದುಬಂದಿರುತ್ತದೆ. ಈ ಕುರಿತಂತೆ ಶ್ರೀ ಬಿ.ಎಸ್. ತಿಪ್ಪೇಸ್ವಾಮಿ, ಕಾರ್ಯನಿರ್ವಾಹಕ ಅಧಿಕಾರಿ ರವರಿಂದ

-2-

ವರದಿಯನ್ನು ಪಡೆಯಲಾಗಿದ್ದು, ಸದರಿಯವರು ದಿನಾಂಕ : 6.6.2005 ರಂದು ಸಲ್ಲಿಸಲಾದ ವರದಿಯನ್ವಯ ಸದರಿ ಶೌಚಾಲಯ ಕಟ್ಟಡ ನಿರ್ಮಾಣಕ್ಕಾಗಿ ಶಾಲಾ ಅಭಿವೃದ್ಧಿ ಸಂಸ್ಥೆಯಿಂದ ಬಿಡುಗಡೆಯಾದ ಮೊತ್ತ ಹಾಗೂ ಸ್ವಚ್ಛ ಗ್ರಾಮ ಯೋಜನೆ ಅನುದಾನ ರೂ.25,000/ಗಳಿಂದ ನಿರ್ಮಿಸಲಾಗಿರುವುದಾಗಿ, ಆದರೆ ಸದರಿ ಕಾಮಗಾರಿಯು ಭೂಸೇನಾ ನಿಗಮದಿಂದ ನಿರ್ಮಾಣವಾಗಿದ್ದು, ಈ ಕಾಮಗಾರಿಗೆ ಸ್ವಚ್ಛ ಗ್ರಾಮ ಯೋಜನೆಯ ಅನುದಾನದ ಮೊತ್ತ ರೂ.60,540/-ಗಳು ಖರ್ಚಾಗಿರುವಂತೆ ದಾಖಲೆಗಳನ್ನು ರೂಪಿಸಿ ಸದರಿ ಮೊತ್ತವನ್ನು ಬಿಡುಗಡೆಗಾಗಿ ಸಲ್ಲಿಸಿದ್ದು, ಭೌತಿಕವಾಗಿ ಈ ಕಾಮಗಾರಿಗಾಗಿ ರೂ.15 ರಿಂದ 20 ಸಾವಿರ ರೂಪಾಯಿಗಳು ಮಾತ್ರ ಖರ್ಚಾಗಿರುವ ಸಾಧ್ಯತೆ ಇರುವುದಾಗಿ ತಿಳಿಸಿರುತ್ತಾರೆ.

ಪ್ರಕರಣದಲ್ಲಿ ಪೋಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ, ಬಿಜಾಪುರ ರವರಿಂದ ವರದಿಯನ್ನು ಸಹ ಪಡೆಯಲಾಗಿದ್ದು, ಸದರಿ ವರದಿಯನ್ವಯ ಚಡಚಣ ಗ್ರಾಮದ ಶಾಲೆಯಲ್ಲಿ 2002-03ನೇ ಸಾಲಿನಲ್ಲಿ ಸರ್ವಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ (ಎರಡು ಬ್ಲಾಕ್)ಶೌಚಾಲಯ ನಿರ್ಮಿಸಿದ್ದು, ಶಾಲೆಗೆ ಕಂಪೌಂಡ ಇಲ್ಲದ ಪ್ರಯುಕ್ತ ಗ್ರಾಮಸ್ಥರು ಶೌಚಾಲಯವನ್ನು ದುರುಪಯೋಗಪಡಿಸಿದ್ದು, 2010-11ನೇ ಸಾಲಿನ್ಲಲಿ ಸದರಿ ಶೌಚಾಲಯವನ್ನು ತೆಗೆದುಹಾಕಿ ಅದೇ ಸ್ಥಳದಲ್ಲಿ ಶಾಲಾ ಕಟ್ಟಡವನ್ನು ನಿರ್ಮಿಸಲಾಗಿರುತ್ತದೆ. ಭೂ ಸೇವಾ ನಿಗಮ (ಕೆ.ಆರ್.ಐ.ಡಿ.ಎಲ್) ವಿಜಾಪುರದಿಂದ 2003-04ನೇ ಸಾಲಿನಲ್ಲಿ ಚಡಚಣ ಗ್ರಾಮದಲ್ಲಿ ಸ್ವಚ್ಛ ಗ್ರಾಮ ಯೋಜನೆಯಲ್ಲಿ ಶೌಚಾಲಯ ನಿರ್ಮಿಸಿದ ಬಗ್ಗೆ ದಾಖಲೆಗಳು ಇದ್ದು, ಆದರೆ ನಿರ್ಮಿಸಿದ ಸ್ಥಳದ ಬಗ್ಗೆ ಸ್ಪಷ್ಟವಾಗಿ ನಮೂದು ಇರುವುದಿಲ್ಲ ಇದರಿಂದ ಈ ಹಿಂದೆ ಶೌಚಾಲಯವನ್ನು ಸ್ವಚ್ಛ ಗ್ರಾಮ ಯೋಜನೆ ಅಡಿಯಲ್ಲಿ ನಿರ್ಮಿಸಿದಂತೆ ತೋರಿಸಿ ಬಿಲ್ಲಿನ ಹಣವನ್ನು ದುರುಪಯೋಗಪಡಿಸಿಕೊಂಡಿದ್ದು, ಒಂದೇ ಕಾಮಗಾರಿಗೆ 2 ಸಲ ಹಣ ಸಂದಾಯ ಆಗಿರುವುದು ಕಂಡುಬಂದಿರುವುದಾಗಿ ತಿಳಿಸಿರುತ್ತಾರೆ.

ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ, ಚಡಚಣ, ತಾಲ್ಲೂಕು ಇಂಡಿ, ವಿಜಾಪುರ ಶಾಲೆಯ ಮುಖ್ಯೋಪಾಧ್ಯಾಯರು ಶಾಲಾ ಆವರಣದ ಗೋಡೆಯನ್ನು ಸಂಪೂರ್ಣವಾಗಿ ಸರ್ವಶಿಕ್ಷಣ ಅಭಿಯಾನ ಯೋಜನೆಯಡಿಯಲ್ಲಿ ಎಸ್.ಎಸ್.ಎ. ವತಿಯಿಂದ ಮಂಜೂರಾದ ಅನುದಾನದಿಂದ ಕಟ್ಟಿಸಲಾಗಿರುತ್ತದೆ ಎಂಬ ಬಗ್ಗೆ ದಾಖಲಾತಿಗಳನ್ನು ಹಾಜರುಪಡಿಸಿದ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿಯ ವತಿಯಿಂದ ಶೌಚಾಲಯ ಕಾಮಗಾರಿ ನಿರ್ವಹಿಸದೆ ರೂ.60,540/- ಖರ್ಚು ತೋರಿಸಿ ಬಿಲ್ಲು ಮಾಡಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದು ದೃಢಪಟ್ಟಿದ್ದು, ಆಪಾದಿತರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ ನಿಯಮ 3 (1)ನ್ನು ಉಲ್ಲಂಘಿಸಿ ಶಿಸ್ತುಕ್ರಮಕ್ಕೆ ಬಾದ್ಯರಾಗಿರುವುದು ಮೇಲ್ನೋಟಕ್ಕೆ ಕಂಡುಬರುತ್ತದೆ. ಆದ್ದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1 ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದಂತೆ ಮಾನ್ಯ ಉಪಲೋಕಾಯುಕ್ತ-1 ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ, ತನಿಖಾ ವರದಿ ಮತ್ತು ಲಗತ್ತಿಸಿರುವ ದಾಖಲೆಗಳನ್ನು ಪರಿಶೀಲಿಸಿದೆ.

ಪ್ರಕರಣದಲ್ಲಿ ಭಾಗಿಯಾಗಿರುವ ಆಪಾದಿತರು ಸರ್ಕಾರಿ ನೌಕರರಾಗಿ ಅವರ ಕಾರ್ಯನಿರ್ವಹಣೆಯಲ್ಲಿ ವಿಫಲರಾಗಿ ಕರ್ನಾಟಕ ನಾಗರೀಕ ಸೇವಾ ನಿಯಮಗಳು 1966ರ ನಿಯಮ 3(1)ನ್ನು ಉಲ್ಲಂಘಿಸಿ ಕರ್ತವ್ಯ ಲೋಪ / ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಮಾನ್ಯ ಉಪ ಲೋಕಾಯುಕ್ತರ ಶಿಫಾರಸ್ಸಿನಂತೆ ಆಪಾದಿತ ಅಧಿಕಾರಿಯಾದ ಶ್ರೀ ವಿ.ಆರ್.ಪೂಜಾರಿ, ಹಿಂದಿನ ಗ್ರಾಮ ಪಂಚಾಯಿತಿ ಕಾರ್ಯದರ್ಶಿ, ಪ್ರಸಕ್ತ ನಿವೃತ್ತ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ) ಇವರು ದಿನಾಂಕ. 31.10.2015ರಂದು ಸೇವೆಯಿಂದ ನಿವೃತ್ತಿ ಹೊಂದಿದ್ದು, ಸದರಿಯವರ ವಿರುದ್ಧದ ಆರೋಪಗಳ

ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಕೆ.ಸಿ.ಎಸ್.ಆರ್. ನಿಯಮ 214 (2) (ಬಿ) (i) ರಡಿ ಮಂಜೂರಾತಿ ನೀಡಿ, ನಂತರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿರ್ಬಂಧ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 11 ರಂತೆ ವಿಚಾರಣೆ ನಡೆಸಲು ಸದರಿ ನಿಯಮಗಳ ನಿಯಮ 14-ಎ ರ ಅಡಿಯಲ್ಲಿ ಪ್ರಕರಣವನ್ನು ಮಾನ್ಯ ಉಪಲೋಕಾಯಕ್ತರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ : ಗ್ರಾಅಪ 57 ಕೆಎಸ್ಎಸ್ 2017</u>**

**<u>ಬೆಂಗಳೂರು, ದಿನಾಂಕ: 19 .04.2017</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ವಿ.ಆರ್. ಪೂಜಾರಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ, ಚಡಚಣ ಗ್ರಾಮ ಪಂಚಾಯಿತಿ, ಇಂಡಿ ತಾಲ್ಲೂಕು, ಬಿಜಾಪುರ ಜಿಲ್ಲೆ ಪ್ರಸ್ತುತ ನಿವೃತ್ತ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಂತೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳ ನಿಯಮ 214 (2) (ಬಿ) (i) ರಡಿ ಮಂಜೂರಾತಿ ನೀಡಿ ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 14 (ಎ) ರಂತೆ ಮಾನ್ಯ ಉಪ ಲೋಕಾಯುಕ್ತ- 1 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

19/04/2017

(ಎಸ್.ರಂಗನಗೌಡ)
19/4/2017 ಸರ್ಕಾರದ ಅಧೀನ ಕಾರ್ಯದರ್ಶಿ
(ಸೇವೆಗಳು ಬಿ & ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

**<u>ಇವರಿಗೆ: -</u>**

1. ಮಹಾಲೇಖಪಾಲರು (ಅ ಮತ್ತು ಇ), ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ.
4. ಶ್ರೀ ವಿ.ಆರ್. ಪೂಜಾರಿ, ಹಿಂದಿನ ಗ್ರಾಮ ಪಂಚಾಯತ್ ಕಾರ್ಯದರ್ಶಿ, ಚಡಚಣ ಗ್ರಾಮ, ಇಂಡಿ ತಾಲ್ಲೂಕು, ಬಿಜಾಪುರ ಜಿಲ್ಲೆ ಪ್ರಸ್ತುತ ನಿವೃತ್ತ ಸಹಾಯಕ ನಿರ್ದೇಶಕರು (ಗ್ರಾಮೀಣ ಉದ್ಯೋಗ), ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ವಿಜಯಪುರ ಇವರ ಮುಖಾಂತರ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
6. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಜಂಟಿ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
7. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಸೂಚನಾ ಫಲಕ : ಗಣಕ ಕೋಶ.